# ಪ್ರಧಾನ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 101/ 2015**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀಮತಿ ಕಾಶಿಬಾಯಿ | ಫ್ರಾಸಾಃ **44** |
| ತಂದೆಯ/ಗಂಡನ ಹೆಸರುಃ | ವೆಂಕಟನಾಯಕ | ಚಾಸಾಃ **37** |
| ವಯಸ್ಸುಃ | **40** ವರ್ಷ | ದಿಃ **01-07-2026** |
| ಉದ್ಯೋಗಃ | ಮನೆ ಕೆಲಸ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಬೊರಬಂಡ ಗ್ರಾಮ | |

ಸಾಕ್ಷಿಗೆ ಹಿಂದಿ ಭಾಷೆ ಬರುತ್ತದೆ ಕನ್ನಡ ಭಾಷೆ ಬರುವುದಿಲ್ಲ ಎಂದು ಹೇಳಿದ ಮೇರೆಗೆ ಶ್ರೀ ವಿ ವಿ ಆರ್ ವಕೀಲರನ್ನು ಭಾಷಾಂತರಕಾರರನ್ನಾಗಿ ನೇಮಿಸಲಾಯಿತು ಹಾಗೂ ಅವರಿಗೆ ಪ್ರಮಾಣ ವಚನ ಭೊದಿಸಲಾಯಿತು.

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ

ಮೃತ ಸೋಮಲಾವರು ನನ್ನ ಮಾವ ಆಗಿದ್ದರು. ಆತ ರಸ್ತೆ ಅಪಘಾತದಲ್ಲಿ ಮರಣಹೊಂದಿದ್ದಾರೆ. ಅಪಘಾತ ಹೇಗೆ ಮತ್ತು ಯಾರ ತಪ್ಪಿನಿಂದ ಆಯಿತು ಎಂಬುದು ನನಗೆ ಗೊತ್ತಿಲ್ಲ. ನಾನು ಈ ಬಗ್ಗೆ ಪೋಲೀಸರಿಗೆ ಹೇಳಿಕೆ ನೀಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿನಾಂಕ 28-06-2014 ರಂದು ಮ 12.30 ಗಂಟೆಗೆ ಮೃತ ಸೋಮಲಾ ಹಾಗೂ ನಮ್ಮೂರಿನ ಜನರು ಅಂತ್ಯಸಂಸ್ಕಾರ ಮುಗಿಸಿಕೊಂಡು ಮರಳಿ ಬರುತ್ತಿದ್ದಾಗ ಚೆನ್ನಾಕಾರ ವ್ಯಾಪ್ತಿಯ ಗುಡ್ಡದಲ್ಲಿ ವಾಹನ ಪಲ್ಟಿಯಾಗಿತ್ತು ಎಂದರೆ ನನಗೆ ಗೊತ್ತಿಲ್ಲ. ಆಗ ನನ್ನ ಮಾವ ಹಾಗೂ ಇತರ ಪ್ರಯಾಣಿಕರಿಗೆ ಗಾಯಗಳು ಆಗಿದ್ದವು ಎಂದರೆ ನನಗೆ ಗೊತ್ತಿಲ್ಲ. ನಾನು ನಂತರ ಅಪಘಾತ ಸ್ಥಳಕ್ಕೆ ಹೋಗಿದ್ದೆನು ಎಂದರೆ ಸರಿಯಲ್ಲ. ಆಗ ವಾಹವನನ್ನು ಆರೋಪಿ ಚಾಲನೆ ಮಾಡುತ್ತಿದ್ದನು ಎಂದರೆ ನನಗೆ ಗೊತ್ತಿಲ್ಲ. ಆರೋಪಿ ವಾಹನವನ್ನು ಅತೀವೇಗ

ಮತ್ತು ಅಲಕ್ಷ್ಯತನದಿಂದ ಚಾಲನೆ ಮಾಡಿ ರಸ್ತೆಯ ಬಲಭಾಗದಲ್ಲಿ ಪಲ್ಟಿ ಮಾಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಸೋಮಲಾರವರು ಉಪಚಾರ ಫಲಿಸದೇ ಆಸ್ಪತ್ರೆಯಲ್ಲಿ ಮರಣ ಹೊಂದಿರುತ್ತಾರೆ ಎಂದರೆ ಸರಿ. ನಾನು ಈ ಮೇಲಿನಂತೆ ಪೋಲೀಸರಿಗೆ ಹೇಳಿಕೆ ನೀಡಿದ್ದೆನು ಎಂದರೆ ಸರಿಯಲ್ಲ. ಸಾಕ್ಷಿ ಯ ಹೇಳಿಕೆಯನ್ನು ನಿಪಿ 111 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಎಂ ಎಂ ಇ ವಕೀಲರಿಂದ ಃ

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲಾ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಃ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.